ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಹಾನಿಗೊಳಗಾಗಿರುವ ರಸ್ತೆ ಮತ್ತು ಸೇತುವೆಗಳ ತುರ್ತು ದುರಸ್ತಿಗೆ 20.00ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಸಕಲೇಶಪುರ ಕ್ಷೇತ್ರದ ವ್ಯಾಪ್ತಿಯಲ್ಲಿ 13 ತುರ್ತು ದುರಸ್ತಿ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ.

ಸಕಲೇಶಪುರ ಮೂಡಿಗೆರೆ ನಡುವೆ ಇರುವ ಹಗಲಹಟ್ಟಿ ಬಳಿ ಇರುವ ಸೇತುವೆ

983-ಶ್ರೀ ಬಿ.ಆರ್. ಗುರುದೇವ್ (ಸಕಲೇಶಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಸಕಲೇಶಪುರ-ಮೂಡಿಗೆರೆ ನಡುವೆ ಇರುವ ಹಗಲಹಟ್ಟಿ ಬಳಿ ಇರುವ ಸೇತುವೆಯು ಸುಮಾರು 100 ವರ್ಷಗಳಷ್ಟು ಹಿಂದಿನದಾಗಿದ್ದು ಆ ಸೇತುವೆ ಶಿಥಿಲಗೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಹೊಸ ಸೇತುವೆ ನಿರ್ಮಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಇ) *ಈ ಸೇತುವೆಯ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಮಂತ್ರಿಗಳು):

ಅ) ಸೇತುವೆಯು ದುರ್ಬಲವಾಗಿದೆ.

ಆ) ಸೇತುವೆಯ ಪುನರ್ ನಿರ್ಮಾಣ ಕೆಲಸವನ್ನು 93-94ನೇ ಆಯವ್ಯಯ ಪಟ್ಟಿಯಲ್ಲಿ ಸೇರಿಸುವ ಪ್ರಸ್ತಾಪವಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಸಕಲೇಶಪುರ ಕೂಡ್ಲಿಪೇಟೆ ರಸ್ತೆಯಲ್ಲಿ ಜಮ್ಮನಹಳ್ಳಿ ಬಳಿ ಇರುವ ಸೇತುವೆ ಶಿಥಿಲಗೊಂಡಿರುವುದು.

338 - ಶ್ರೀ ಬಿ.ಆರ್. ಗುರುದೇವ್ (ಸಕಲೇಶಪುರ) : ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಸಕಲೇಶಪುರ ಕೂಡ್ಲಿಪೇಟೆ ರಸ್ತೆಯಲ್ಲಿ ಜಮ್ಮನಹಳ್ಳಿ ಬಳಿ ಇರುವ ಸೇತುವೆಯು ಸುಮಾರು 100 ವರ್ಷಗಳಷ್ಟು ಹಳೆಯದಾಗಿದ್ದು, ಶಿಥಿಲಗೊಂಡಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಈ ಸೇತುವೆಯನ್ನು ಹೊಸದಾಗಿ ನಿರ್ಮಿಸಲು ಸರ್ಕಾದವರು ಕೈಗೊಂಡಿರುವ ಕ್ರಮಗಳಾವುವು?*

ಇ) *ಈ ಸೇತುವೆಯ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು.*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಮಂತ್ರಿಗಳು)

ಅ) ಈ ಸೇತುವೆಯು ದುರ್ಬಲವಾಗಿದೆ.

ಆ) ಸೇತುವೆಯ ಪುನರ್ ನಿರ್ಮಾಣ ಕೆಲಸವನ್ನು 93-94ನೇ ಆಯವ್ಯಯ ಪಟ್ಟಿಯಲ್ಲಿ ಸೇರಿಸುವ ಪ್ರಸ್ತಾಪವಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.